# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

36

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭೆ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 28/1/21

# ಸೌಮ್ಯಾ ವಿರುದ್ಧ ಎಫ್‌ಐಆರ್: ಪ್ರತಿಭಟನೆ



ಶಾಸಕಿ ಸೌಮ್ಯಾ ರೆಡ್ಡಿ ಅವರ ವಿರುದ್ಧ ದಾಖಲಾದ ಎಫ್‌ಐಆರ್ ಖಂಡಿಸಿ ಬುಧವಾರ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಜಯನಗರದಲ್ಲಿ ಪ್ರತಿಭಟನೆ ನಡೆಸಿದರು.

ಬೆಂಗಳೂರು: ಶಾಸಕಿ ಸೌಮ್ಯಾ ರೆಡ್ಡಿ ಅವರ ವಿರುದ್ಧ ದಾಖಲಾದ ಎಫ್‌ಐಆರ್ ಖಂಡಿಸಿ ಬುಧವಾರ ಕಾಂಗ್ರೆಸ್ ಮುಖಂಡರು ಜಯನಗರದಲ್ಲಿ ಪ್ರತಿಭಟನೆ ನಡೆಸಿದರು.

ಜಯನಗರದ ಮಯ್ಯಾಸ್ ಹೋಟೆಲ್ ಎದುರು ಜಮಾವಣೆಗೊಂಡ ಕಾಂಗ್ರೆಸ್‌ನ ಮಾಜಿ ಸಚಿವರು, ಶಾಸಕರು, ವಿಧಾನ ಪರಿಷತ್ ಸದಸ್ಯರು, 'ಬಿಜೆಪಿ ಸರ್ಕಾರ ಅಧಿಕಾರವನ್ನು ದುರುಪಯೋಗಪಡಿಸಿ ಕೊಂಡು ಕುತಂತ್ರದಿಂದ ಶಾಸಕಿ ಸೌಮ್ಯಾ ರೆಡ್ಡಿ ಅವರ ಮೇಲೆ ಸೇಡು ತೀರಿಸಿಕೊಳ್ಳುತ್ತಿದೆ. ಇದು ಖಂಡನೀಯ' ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕೇಂದ್ರದ ರೈತ ವಿರೋಧಿ ನೀತಿ ಖಂಡಿಸಿ ದೇಶಾದ್ಯಂತ ಪ್ರತಿಭಟನೆಗಳು ನಡೆಯುತ್ತಿವೆ. ಅದಕ್ಕೆ ಈಚೆಗೆ ಕಾಂಗ್ರೆಸ್ ಕೂಡ ರೈತರ ಕೂಗಿಗೆ ದನಿಗೂಡಿಸಿ, ಕೆಪಿಸಿಸಿ ರಾಜ್ಯ ಘಟಕದ ಅಧ್ಯಕ್ಷ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿತು. ಇದರಲ್ಲಿ ಜಯನಗರ ಶಾಸಕಿ ಸೌಮ್ಯಾ ರೆಡ್ಡಿ ಅವರು ಕೂಡ ಭಾಗವಹಿಸಿದ್ದರು. ಈ ವೇಳೆ ಪೊಲೀಸ್ ಸಿಬ್ಬಂದಿ, ಶಾಸಕಿಯೊಂದಿಗೆ ಅನುಚಿತವಾಗಿ ವರ್ತಿಸಿದ್ದರು. ಇದನ್ನು ಪ್ರಶ್ನಿಸಿದ್ದಕ್ಕೆ ಅವರ ವಿರುದ್ಧವೇ ಕುತಂತ್ರದಿಂದ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಕಾಂಗ್ರೆಸ್ ಮುಖಂಡರು ಆರೋಪಿಸಿದರು.

ಕೆಪಿಸಿಸಿ ಕಾರ್ಯಾಧ್ಯಕ್ಷ ರಾಮಲಿಂಗಾ ರೆಡ್ಡಿ ಮಾತನಾಡಿ, ಶಾಸಕಿ ಸೌಮ್ಯಾ ರೆಡ್ಡಿ ವಿರುದ್ಧ ಬಿಜೆಪಿ ನಿರಂತರವಾಗಿ ಅಪಪ್ರಚಾರ ಮಾಡುತ್ತಿದೆ. ಈಗ ಈಚೆಗೆ ನಡೆದ ಪ್ರತಿಭಟನೆ ವೇಳೆ ಸೌಮ್ಯಾ ಅವರು ಪೊಲೀಸ್ ಸಿಬ್ಬಂದಿ ಮೇಲೆ ಹಲ್ಲೆ ಮಾಡಿದ್ದಾರೆ ಎಂದು ಆರೋಪಿಸಲಾಗುತ್ತಿದೆ. ತಪ್ಪು ಮಾಡಿದ್ದರೆ ಕ್ರಮ ಕೈಗೊಳ್ಳಲಿ. ಅದು ಬಿಟ್ಟು ಅಪಪ್ರಚಾರಗಳು ಮಾಡಿ ದ್ವೇಷ ರಾಜಕಾರಣ ಮಾಡುತ್ತಿರುವುದು ಎಷ್ಟು ಸರಿ? ಘಟನೆ ನಡೆದು 48 ಗಂಟೆ ಕಳೆದರೂ ದೂರು ದಾಖಲಾಗಿರಲಿಲ್ಲ. ಆದರೆ, ಬಿಜೆಪಿ ಮಹಿಳಾ ಕಾರ್ಯಕರ್ತೆಯರು ದೂರು ನೀಡಿದ ತಕ್ಷಣ ಎಫ್‌ಐಆರ್ ದಾಖಲಾಗುತ್ತದೆ ಎಂದರೆ ಏನರ್ಥ? ಎಂದು ಕೇಳಿದರು